ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 21/09/2019



# ಹೆಬ್ಬಾಳ್ಕರ್ ಗೆ ಇಡಿ ಡ್ರಿಲ್ ಡಿಕೆಶಿಗೆ ಜಾಮೀನಿನ ಜಪ

ಸಂ.ಕ. 21-9-19



ಬೆಂಗಳೂರು: ಜಾಮೀನು ಕೋರಿ ಡಿಕೆ ಶಿವಕುಮಾರ್ ಸಲ್ಲಿಸಿರುವ ಅರ್ಜಿಯನ್ನು ನ್ಯಾಯಾಲಯವು ಶನಿವಾರ ವಿಚಾರಣೆಗೆ ಕೈಗೆತ್ತಿಕೊಳ್ಳಲಿದ್ದು, ಈ ಮಧ್ಯ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ಅವರನ್ನು ರಾತ್ರಿವರೆಗೂ ವಿಚಾರಣೆಗೆ ಒಳಪಡಿಸಿ ಅಧಿಕಾರಿಗಳು ಮಾಹಿತಿ ಪಡೆದಿದ್ದಾರೆ.

ಶುಕ್ರವಾರ ಮಧ್ಯಾಹ್ನ 12 ಗಂಟೆಗೆ ವಿಚಾರಣೆ ಆರಂಭಿಸಿದ ಇಡಿ ಅಧಿಕಾರಿಗಳು ರಾತ್ರಿವರೆಗೂ ಮಾಹಿತಿ ಕಲೆ ಹಾಕಿದ್ದಾರೆ.

ಡಿಕೆ ಶಿವಕುಮಾರ್ ಮತ್ತು ಲಕ್ಷ್ಮೀ ಹೆಬ್ಬಾಳ್ಕರ್ ನಡುವಿನ ಹಣ ವರ್ಗಾವಣೆಗೆ ಸಂಬಂಧಿಸಿದಂತೆ ಮಾಹಿತಿ ಕಲೆ ಹಾಕಿರುವ ಇಡಿ ಅಧಿಕಾರಿಗಳು ನಿರಂತರವಾಗಿ ವಿಚಾರಣೆಗೆ ಒಳಪಡಿಸಿದ್ದಾರೆ. ವಿಚಾರಣೆ ಇನ್ನೂ ಎರಡು ದಿನಗಳ ಕಾಲ ನಡೆವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ 184 ಜನರಿಗೆ ಇಡಿ ಅಧಿಕಾರಿಗಳು ನೋಟಿಸ್ ಜಾರಿ ಮಾಡಿದ್ದಾರೆ. ಡಿಕೆ ಶಿವಕುಮಾರ್ ಮಾವ ತಿಮ್ಮಯ್ಯ ಅವರಿಗೂ ಇಡಿ ಅಧಿಕಾರಿಗಳು ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ಜಾರಿ ಮಾಡಲಾಗಿದೆ. ಹೀಗಾಗಿ ಒಟ್ಟಾರೆ ಪ್ರಕರಣವು ಜಟಿಲಗೊಂಡಿದೆ.

8